**ಈ ಪ್ರಶ್ನೆಪುಸ್ತಿಕೆಯನ್ನು ತೆರೆಯುವಂತೆ ನಿಮಗೆ ಸೂಚಿಸುವವರೆಗೂ ಇದನ್ನು ತೆರೆಯಬಾರದು**

# 2018

182157

## ಪ್ರಶ್ನೆಪತ್ರಿಕೆ

ಪ್ರಶ್ನೆ ಪತ್ರಿಕೆ ಶ್ರೇಣಿ

**A**

## ಸಾಮಾನ್ಯ ಪತ್ರಿಕೆ (ಪತ್ರಿಕೆ-I)

ಸಮಯ : 1½ ಗಂಟೆಗಳು

ವಿಷಯ ಸಂಕೇತ : **359**

ಗರಿಷ್ಠ ಅಂಕಗಳು : 200

### ಸೂಚನೆಗಳು

1. ಪರೀಕ್ಷೆ ಪ್ರಾರಂಭವಾದ ಕೂಡಲೇ ನಿಮ್ಮ ಪ್ರಶ್ನೆಪತ್ರಿಕೆಯಲ್ಲಿ ಅಮುದ್ರಿತ ಅಥವಾ ಹರಿದಿರುವ ಅಥವಾ ಬಿಟ್ಟುಹೋಗಿರುವ ಪುಟಗಳು ಅಥವಾ ಪ್ರಶ್ನೆಗಳು ಇತ್ಯಾದಿಗಳು ಕಂಡುಬಂದಲ್ಲಿ ನಿಮ್ಮ ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಮುದ್ರಿತವಾಗಿರುವ ಅದೇ ಶ್ರೇಣಿಯ ಪೂರ್ಣ ಪ್ರಶ್ನೆಪತ್ರಿಕೆಯೊಂದಿಗೆ ಬದಲಾಯಿಸಿಕೊಳ್ಳತಕ್ಕದ್ದು.
2. ಅಭ್ಯರ್ಥಿಯು ಪ್ರಶ್ನೆಪತ್ರಿಕೆಯ ಶ್ರೇಣಿಯು, ತಮ್ಮ ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಮುದ್ರಿತವಾಗಿರುವ ಅದೇ ಪ್ರಶ್ನೆಪತ್ರಿಕೆಯ ಶ್ರೇಣಿಯಾಗಿರುವುದೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ವ್ಯತ್ಯಾಸಗಳು ಕಂಡುಬಂದಲ್ಲಿ, ಸಂವೀಕ್ಷಕರ ಗಮನಕ್ಕೆ ತರುವುದು ಮತ್ತು ಪ್ರಶ್ನೆಪತ್ರಿಕೆಯ ಶ್ರೇಣಿಯು ತಮಗೆ ಹೊಂದುವ (ಅದೇ) ಪ್ರಶ್ನೆಪತ್ರಿಕೆಯಾದ ಮತ್ತು ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಮುದ್ರಿತವಾಗಿರುವ ಶ್ರೇಣಿಯ ಪ್ರಶ್ನೆಪತ್ರಿಕೆಯನ್ನೇ ಪಡೆಯತಕ್ಕದ್ದು.
3. ಪಕ್ಕದಲ್ಲಿ ಒದಗಿಸಿರುವ ಪ್ರಶ್ನೆಪತ್ರಿಕೆಯ ಚೌಕದಲ್ಲೇ ನಿಮ್ಮ ನೋಂದಣಿ ಸಂಖ್ಯೆಯನ್ನು ನಮೂದಿಸಬೇಕು. ಪ್ರಶ್ನೆಪುಸ್ತಿಕೆಯಲ್ಲಿ ಬೇರೆ ಏನನ್ನೂ ಬರೆಯಬಾರದು.

| ನೋಂದಣಿ ಸಂಖ್ಯೆ | | | | | | |
|---|---|---|---|---|---|---|
| | | | | | | |

4. ಈ ಪ್ರಶ್ನೆಪುಸ್ತಿಕೆ **100** ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. ಪ್ರತಿಯೊಂದು ಪ್ರಶ್ನೆಯೂ 4 ಪ್ರತಿಕ್ರಿಯೆಗಳನ್ನು (ಉತ್ತರಗಳನ್ನು) ಒಳಗೊಂಡಿರುತ್ತದೆ. ನೀವು ಉತ್ತರ ಹಾಳೆಯಲ್ಲಿ ಗುರುತು ಮಾಡಬೇಕೆನಿಸುವ ಉತ್ತರವನ್ನು ಆಯ್ಕೆ ಮಾಡಿಕೊಳ್ಳಿ. ಒಂದುವೇಳೆ ಅಲ್ಲಿ ಒಂದಕ್ಕಿಂತ ಹೆಚ್ಚು ಸರಿಯಾದ ಉತ್ತರಗಳಿವೆಯೆಂದು ನೀವು ಭಾವಿಸಿದರೆ ನಿಮಗೆ ಅತ್ಯುತ್ತಮವೆನಿಸುವ ಉತ್ತರಕ್ಕೆ ಗುರುತು ಮಾಡಿ. ಏನೇ ಆದರೂ ಪ್ರತಿ ಪ್ರಶ್ನೆಗೆ ನೀವು ಕೇವಲ ಒಂದು ಉತ್ತರವನ್ನು ಮಾತ್ರ ಆಯ್ಕೆಮಾಡಬೇಕು.
5. ಎಲ್ಲಾ ಉತ್ತರಗಳನ್ನು ನಿಮಗೆ ಒದಗಿಸಲಾಗಿರುವ ಪ್ರತ್ಯೇಕ ಓ.ಎಂ.ಆರ್. ಉತ್ತರ ಹಾಳೆಯ ಮೇಲೆ ಕೇವಲ ಕಪ್ಪು ಅಥವಾ ನೀಲಿ ಶಾಯಿಯ ಬಾಲ್ ಪಾಯಿಂಟ್ ಪೆನ್ನಿನಲ್ಲಿ ಮಾತ್ರ ಗುರುತು ಮಾಡಬೇಕು. ಓ.ಎಂ.ಆರ್. ಉತ್ತರಪತ್ರಿಕೆ ಹಾಳೆಯಲ್ಲಿನ ವಿವರವಾದ ಸೂಚನೆಗಳನ್ನು ಗಮನಿಸುವುದು.
6. ಎಲ್ಲಾ ಪ್ರಶ್ನೆಗಳಿಗೆ ಸಮಾನ ಅಂಕಗಳು. ಎಲ್ಲಾ ಪ್ರಶ್ನೆಗಳಿಗೆ ಉತ್ತರಿಸಿರಿ. ಪ್ರತಿ ತಪ್ಪು ಉತ್ತರಕ್ಕೆ ಪ್ರಶ್ನೆಗೆ ನಿಗದಿಪಡಿಸಿದ ಅಂಕಗಳ ¼ (0.25) ರಷ್ಟು ಅಂಕಗಳನ್ನು ಕಳೆಯಲಾಗುವುದು.
7. ಚಿತ್ತು ಕೆಲಸಕ್ಕಾಗಿ ಹಾಳೆಗಳನ್ನು ಪ್ರಶ್ನೆಪುಸ್ತಿಕೆಯ ಕೊನೆಯಲ್ಲಿ ಸೇರಿಸಲಾಗಿದೆ. ಪ್ರಶ್ನೆಪುಸ್ತಿಕೆಯ ಇನ್ನುಳಿದ ಯಾವ ಭಾಗದಲ್ಲಿಯೂ ನೀವು ಯಾವ ರೀತಿಯ ಗುರುತನ್ನು ಮಾಡತಕ್ಕದ್ದಲ್ಲ.
8. ಪರೀಕ್ಷೆಯ ಮುಕ್ತಾಯವನ್ನು ಸೂಚಿಸುವ ಅಂತಿಮ ಗಂಟೆ ಬಾರಿಸಿದ ತಕ್ಷಣವೇ ಓ.ಎಂ.ಆರ್. ಉತ್ತರಪತ್ರಿಕೆ ಹಾಳೆಯಲ್ಲಿ ಇನ್ನಾವುದೇ ಗುರುತು ಮಾಡುವುದನ್ನು ನಿಲ್ಲಿಸಬೇಕು. ಸಂವೀಕ್ಷಕರು ಬಂದು ನಿಮ್ಮಲ್ಲಿರುವ ಓ.ಎಂ.ಆರ್. ಉತ್ತರ ಹಾಳೆಯನ್ನು ತಮ್ಮ ವಶಕ್ಕೆ ಪಡೆದುಕೊಂಡು ಲೆಕ್ಕಕ್ಕೆ ತೆಗೆದುಕೊಳ್ಳುವವರೆಗೂ ನಿಮ್ಮ ನಿಮ್ಮ ಆಸನದಲ್ಲಿಯೇ ಕುಳಿತಿರತಕ್ಕದ್ದು.
9. ಪ್ರಶ್ನೆಗಳು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿರುತ್ತವೆ. ಕನ್ನಡ ಪ್ರಶ್ನೆಗಳಲ್ಲಿ ಸಂದೇಹ ಉಂಟಾದರೆ, ದಯವಿಟ್ಟು ಆಂಗ್ಲ ಭಾಷೆಯ ಪ್ರಶ್ನೆಗಳನ್ನು ಗಮನಿಸುವುದು. ಪ್ರಶ್ನೆಪತ್ರಿಕೆಯ ಪ್ರಶ್ನೆಗಳಲ್ಲಿ ಯಾವುದೇ ಗೊಂದಲಗಳಿದ್ದರೂ ಆಂಗ್ಲ ಭಾಷೆಯ ಪ್ರಶ್ನೆಗಳೇ ಅಂತಿಮವಾಗಿರುತ್ತವೆ.

ಯಾವುದೇ ರೀತಿಯ ಮೊಬೈಲ್ ಫೋನ್, ಕ್ಯಾಲ್ಕ್ಯುಲೇಟರ್ ಮತ್ತು ಇತರೆ ರೀತಿಯ ಎಲೆಕ್ಟ್ರಾನಿಕ್/ಕಮ್ಯೂನಿಕೇಷನ್ ಸಾಧನಗಳು ಇತ್ಯಾದಿಗಳನ್ನು ಪರೀಕ್ಷಾ ಕೇಂದ್ರದ ಆವರಣದೊಳಗೆ ತರುವುದನ್ನು ನಿಷೇಧಿಸಿದೆ.

**Note : English version of the instructions is printed on the back cover of this booklet.**



27, 38, 46, 68, 83

SEAL

1. ಮಳೆಯ ಹನಿಗಳು ಗುಂಡಾಕಾರವಾಗಿರುತ್ತವೆ. ಏಕೆಂದರೆ

(1) ಸ್ನಿಗ್ಧತೆ

(2) ಮೇಲ್ಮೈ ಸೆಳೆತ

(3) ಒತ್ತಡ

(4) ಹೈಡ್ರೋಸ್ಟ್ಯಾಟಿಕ್ ಒತ್ತಡ

2. ತರಂಗದ ಆವರ್ತಾಂಕವನ್ನು ಅಳೆಯುವ ಏಕಮಾನ

(1) ಮೀಟರ್

(2) ಪ್ಯಾಸ್ಕಲ್

(3) ಸೆಕೆಂಡುಗಳು

(4) ಹರ್ಟ್ಜ್

3. ಸಮತಲ ದರ್ಪಣದಲ್ಲಿ ಮೂಡುವ ಪ್ರತಿಬಿಂಬವು

(1) ದರ್ಪಣದ ಹಿಂಭಾಗದಲ್ಲಿ ನೈಜ

(2) ದರ್ಪಣದ ಮುಂಭಾಗದಲ್ಲಿ ಮಿಥ್ಯ

(3) ದರ್ಪಣದ ಮುಂಭಾಗದಲ್ಲಿ ನೈಜ

(4) ದರ್ಪಣದ ಹಿಂಭಾಗದಲ್ಲಿ ಮಿಥ್ಯ

4. ಈ ಕೆಳಕಂಡ ಯಾವ ದಿನಾಂಕದಂದು ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುವುದು?

(1) ಜನವರಿ 25

(2) ಫೆಬ್ರುವರಿ 25

(3) ಜನವರಿ 26

(4) ಆಗಸ್ಟ್ 15

5. 2014ರಲ್ಲಿ ರಚನೆಯಾದ ಭಾರತದ 29ನೇ ರಾಜ್ಯವನ್ನು ಹೆಸರಿಸಿ

(1) ಮೇಘಾಲಯ

(2) ಸಿಕ್ಕಿಂ

(3) ಛತ್ತೀಸ್‌ಗಡ

(4) ತೆಲಂಗಾಣ

6. ಯಾವ ದಿನವನ್ನು ''ಉತ್ತಮ ಆಳ್ವಿಕ ದಿನ''ವನ್ನಾಗಿ ಭಾರತದಲ್ಲಿ ಆಚರಿಸಲಾಗುತ್ತದೆ?

(1) ಸೆಪ್ಟೆಂಬರ್ 5ರಂದು

(2) ಅಕ್ಟೋಬರ್ 2 ರಂದು

(3) ಡಿಸೆಂಬರ್ 25 ರಂದು

(4) ನವಂಬರ್ 14 ರಂದು

7. ಭಾರತೀಯ ಸಂವಿಧಾನದ ಭಾಗ-II' ಇದನ್ನು ಕುರಿತದ್ದು

(1) ಫೆಡರಲಿಸಂ

(2) ಕಾನೂನಿನ ನಿಯಮ

(3) ಸ್ಥಳೀಯ ಸ್ವ-ಸರ್ಕಾರ

(4) ಪೌರತ್ವ

8. ಅಸ್ಪೃಶ್ಯತೆಯನ್ನು ಮತ್ತು ಯಾವುದೇ ರೂಪದಲ್ಲಿ ಅದನ್ನಾಚರಿಸುವುದನ್ನು ಸಹ ನಿಷೇಧಿಸಲಾಗಿದೆ. ಇದನ್ನು ಈ ವಿಧಿಯಲ್ಲಿ ಹೇಳಲಾಗಿದೆ

(1) 15

(2) 16

(3) 17

(4) 18